ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು

---

ಸಂಖ್ಯೆ ಅ1 ಸಂ ವಿ ನಿಯೋ 01/2019-20 ದಿನಾಂಕ: 02.08.2019

**ಸು ತ್ತೋ ಲೆ**

ವಿಷಯ: ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಇವರ ವತಿಯಿಂದ ಆಯೋಜಿಸಲಾಗಿರುವ "ರಾಜ್ಯ ಮಟ್ಟದ ಯುವ ವಿಜ್ಞಾನಿ ಸ್ಪರ್ಧೆ" ಯಲ್ಲಿ ಭಾಗವಹಿಸುವ ವಿದ್ಯಾರ್ಥಿ/ಶಿಕ್ಷಕರಿಗೆ ಅನುಮತಿ ನೀಡುವ ಬಗ್ಗೆ.

ಉಲ್ಲೇಖ: ಗೌರವ ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಬೆಂಗಳೂರು ಇವರ ಪತ್ರ ಸಂಖ್ಯೆ ಕರಾವಿಪ/2.1.1/ಯು.ವಿ/2019-20/52221 ದಿನಾಂಕ 25.07.2019

- - - - -

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಬೆಂಗಳೂರು ಇವರ ವತಿಯಿಂದ ದಿನಾಂಕ 08.08.2019 ರಂದು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ರಾಜ್ಯಮಟ್ಟದ ಯುವ ವಿಜ್ಞಾನಿಗಳ ಸಮಾವೇಶವನ್ನು ಆಯೋಜಿಸಿದ್ದು, ಈ ಸಮಾವೇಶದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಸಮಾವೇಶದಲ್ಲಿ ಭಾಗವಹಿಸಲು ಅನುಮತಿ ನಿಡುವಂತೆ ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ ಈ ಮೇಲ್ಕಂಡ ಸಮಾವೇಶದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಈ ಕೆಳಕಂಡ ಷರತ್ತುಗಳೊಂದಿಗೆ ಅನುಮತಿ ನೀಡಿದೆ.

1. ಸಮಾವೇಶದಲ್ಲಿ 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಮಾತ್ರ ಭಾಗವಹಿಸಲು ಅವಕಾಶವಿರುತ್ತದೆ.
2. ಜಿಲ್ಲಾ ಮಟ್ಟದ ಸಮಾವೇಶದಲ್ಲಿ ಪ್ರತಿ ಶಾಲೆಯಿಂದ 03 ವಿದ್ಯಾರ್ಥಿಗಳು ಮತ್ತು ಇವರಿಗೆ ಮಾರ್ಗದರ್ಶಕರಾಗಿ ಒಬ್ಬರು ವಿಜ್ಞಾನ ಶಿಕ್ಷಕರು ಭಾಗವಹಿಸುವುದು.
3. ರಾಜ್ಯಮಟ್ಟದ ಸಮಾವೇಶದಲ್ಲಿ ಪ್ರತಿ ಜಿಲ್ಲೆಯಿಂದ 03 ವಿದ್ಯಾರ್ಥಿಗಳು ಮತ್ತು ಇವರಿಗೆ ಮಾರ್ಗದರ್ಶಕರಾಗಿ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಂದ ನಿಯೋಜಿಸಲ್ಪಟ್ಟ ಒಬ್ಬರು ವಿಜ್ಞಾನ ಶಿಕ್ಷಕರು ಭಾಗವಹಿಸುವುದು.
4. ಜಿಲ್ಲಾ ಮಟ್ಟದ ಸಮಾವೇಶದ ಸ್ಥಳವನ್ನು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಪದಾಧಿಕಾರಿಗಳು ಆಯಾ ಜಿಲ್ಲಾ ಉಪನಿರ್ದೇಶಕರನ್ನು ಸಂಪರ್ಕಿಸಿ ಅವರ ಸಹಯೋಗದೊಂದಿಗೆ ನಿರ್ಧರಿಸುವುದು ಹಾಗೂ ರಾಜ್ಯ ಮಟ್ಟದ ಸಮಾವೇಶದ ಸ್ಥಳವನ್ನು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಇವರ ವತಿಯಿಂದ ನಿಗದಿ ಪಡಿಸಿ ಆಯಾ ಜಿಲ್ಲಾ ಉಪನಿರ್ದೇಶಕರಿಗೆ ಮಾಹಿತಿ ನೀಡುವುದು.
5. ಸಮಾವೇಶದಲ್ಲಿ ಭಾಗವಹಿಸುವ ಶಿಬಿರಾರ್ಥಿಗಳಿಗೆ ಶುದ್ಧ ಕುಡಿಯುವ ನೀರು/ಲಘು ಉಪಹಾರ ಹಾಗೂ ಊಟೋಪಚಾರದ ವ್ಯವಸ್ಥೆ ಹಾಗೂ ತಂಗುವ ವ್ಯವಸ್ಥೆಯನ್ನು (ಅಗತ್ಯವಿದ್ದಲ್ಲಿ) ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ವತಿಯಿಂದ ಒದಗಿಸುವುದು.
6. ಸಮಾವೇಶದಲ್ಲಿ ಭಾಗವಹಿಸುವ ವಿದ್ಯಾರ್ಥಿ/ಶಿಕ್ಷಕರಿಗೆ ತಗಲುವ ಪ್ರಯಾಣ ಭತ್ಯೆಯನ್ನು ಆಯಾ ಶಾಲೆಯ ಸಂಚಿತ ನಿಧಿಯಿಂದ ನಿಯಮಾನುಸಾರ ಭರಿಸಲು ಅನುಮತಿ ನೀಡಿದೆ.

. . . . . . . .2

7. ಸಮಾವೇಶದಲ್ಲಿ ಭಾಗವಹಿಸುವ ವಿದ್ಯಾರ್ಥಿ/ಶಿಕ್ಷಕರ ಸುರಕ್ಷತೆ, ತುರ್ತು ವೈದ್ಯಕೀಯ ಅವಶ್ಯಕತೆ ಹಾಗೂ ಇತರೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ವತಿಯಿಂದ ಒದಗಿಸುವುದು.
8. ಸಮಾವೇಶದಲ್ಲಿ ಭಾಗವಹಿಸಿದ ದಿನದ ದೈನಂದಿನ ಪಾಠ-ಪ್ರವಚನದ ಕೊರತೆಯನ್ನು ಮುಂದಿನ ಎರಡು ಶನಿವಾರಗಳಂದು ಪೂರ್ಣ ದಿನ ಕಾರ್ಯ ನಿರ್ವಹಿಸುವುದರ ಮೂಲಕ ಸರಿದೂಗಿಸುವುದು.
9. ಸಮಾವೇಶದ ಕುರಿತು ಹೆಚ್ಚಿನ ಮಾಹಿತಿಗಾಗಿ ಶ್ರೀ ದೊಡ್ಡಬಸಪ್ಪ, ಕಾರ್ಯಕಾರಿ ಸಮಿತಿ ಸದಸ್ಯರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು (ಮೊಬೈಲ್ ಸಂಖ್ಯೆ : 98806 56200), ಶ್ರೀಮತಿ ದೇವಿಕಾ ಕೀರ್ತಿ, ಯೋಜನಾ ಸಹಾಯಕರು (ಮೊಬೈಲ್ ಸಂಖ್ಯೆ 94495 30245) ಇವರನ್ನು ಸಂಪರ್ಕಿಸುವುದು.
10. ಜಿಲ್ಲಾ ಉಪನಿರ್ದೇಶಕರು ಸಮಾವೇಶಕ್ಕೆ ನಿಯೋಜಿಸಲ್ಪಟ್ಟ ವಿದ್ಯಾರ್ಥಿ ಶಿಕ್ಷಕರ ವಿವರವನ್ನು ಈ ಕಚೇರಿಯ ಇ-ಮೇಲ್ ವಿಳಾಸ dpiminority2010@gmail.com ಇಲ್ಲಿಗೆ ತಪ್ಪದೆ ಕಳುಹಿಸುವುದು.

(ಕೆ.ಎಸ್.ಮಣಿ)
ನಿರ್ದೇಶಕರು
ಉರ್ದು ಮತ್ತು ಇತರೆ ಅಲ್ಪಸಂಖ್ಯಾತ
ಭಾಷಾ ಶಾಲೆಗಳು

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
3. ಸಂಬಂಧಿಸಿದ ಪ್ರೌಢಶಾಲಾ ಮುಖ್ಯೋಪಾಧ್ಯಾಯರಿಗೆ - ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ

ಪ್ರತಿಯನ್ನು ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ

1. ಗೌರವ ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಬೆಂಗಳೂರು.
2. ಕಚೇರಿ ಪ್ರತಿ.